ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

ಕೊಳ್ಳೇಗಾಲ: 10-02-2026 ವಾಯುಮಾಲಿನ್ಯದಿಂದ ಜೀವಿಗಳಿಗೆ ಹಾನಿ, ಪರಿಸರಕ್ಕೆ ಹಾನಿ ಉಂಟು ಮಾಡುವ ರಾಸಾಯನಿಕಗಳು ಭೂಮಿಯ ವಾತಾವರಣಕ್ಕೆ ಸೇರಿ ಮಾಲಿನ್ಯ ಉಂಟಾಗಿ ಮನುಷ್ಯನ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ದೆಹಲಿಯಲ್ಲಿ ವಾಯುಮಾಲಿನ್ಯ ಉಂಟಾಗಿ ಅಲ್ಲಿನ ಪರಿಸರ ಕಲುಷಿತಗೊಂಡಿದೆ. ಭವಿಷ್ಯದ ದೃಷ್ಠಿಯಿಂದ ಮಾಲಿನ್ಯವನ್ನು ತಡೆಗಟ್ಟುವುದು ಅತ್ಯಗತ್ಯ ಎಂದು ಕೊಳ್ಳೇಗಾಲ ವಲಯ ಅರಣ್ಯಾಧಿಕಾರಿಗಳಾದ ಶ್ರೀಮತಿ ಮೇಘನ ರವರು ತಿಳಿಸಿದರು.

ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪರಿಸರ ಅಧ್ಯಯನ ವಿಭಾಗದ ವತಿಯಿಂದ ವಾಯುಮಾಲಿನ್ಯ ಮತ್ತು ಪರಿಸರ ಸಂರಕ್ಷಣೆ ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ಕಾರ್ಯಕ್ರವನ್ನು ಆಯೋಜಿಸಲಾಗಿತ್ತು.

ವಿಶೇಷ ಉಪನ್ಯಾಸಕ ನೀಡಲು ಆಗಮಿಸಿದ ಶ್ರೀ ರವಿಕುಮಾರ್ ಆರ್ ರವರು ಮಾತಾನಾಡಿ ಇಂದಿನ ದಿನಗಳಲ್ಲಿ ಪರಿಸರವು ಮಾನವ ಹಾಗೂ ಇನ್ನಿತರ ಚಟುವಟಿಕೆಗಳಿಂದ ಹಾಳಾಗುತ್ತಿರುವುದು ತೀರಾ ಅಪಾಯಕಾರಿ ಹಾಗಾಗಿ ಇದರ ಸಂರಕ್ಷಣೆ ನಮ್ಮೆಲ್ಲರ ಜವಬ್ದಾರಿ ಮತ್ತು ನಮ್ಮ ಹೊಣೆಗಾರಿಕೆಯೂ ಹೌದು. ಆದ್ದರಿಂದ ಮುಂದಿನ ಭವಿಷ್ಯದ ದೃಷ್ಠಿಯಿಂದ ಪರಿಸರವನ್ನು ಸಂರಕ್ಷಿಸುವುದು ನಮ್ಮ ನಿಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು.

ಸಮಾರಂಭಧ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ ಹೆಚ್.ಎಸ್.ಕೊಂಗಳಪ್ಪ ನವರು ಮಾತನಾಡುತ್ತಾ ಚಾಮರಾಜನಗರ ಜಿಲ್ಲೆಯ ಸುತ್ತಮುತ್ತ ಅರಣ್ಯಗಳಿರುವುದರಿಂದ ಪರಿಸರ ಉತ್ತಮವಾಗಿದೆ. ಭವಿಷ್ಯದ ದೃಷ್ಠಿಯಿಂದ ಹೆಚ್ಚು ಹೆಚ್ಚು ಮರಗಿಡಗಳನ್ನು ಬೆಳೆಸುವುದು ಸೂಕ್ತ. ಈ ನಿಟ್ಟಿನಲ್ಲಿ ನಾವು ನೀವೆಲ್ಲರು ಕಾರ್ಯೋನ್ಮುಖರಾಗಬೇಕೆಂದು ಪರಿಸರದ ಮಹತ್ವನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಚಾಲಕರಾದ ಶ್ರೀಮತಿ ಮಮತ ಎಸ್, ಪರಿಸರ ಅಧ್ಯಯನ ವಿಭಾಗದ ಮುಖ್ಯಸ್ಥರಾದ ಶ್ರೀ ಪಿ ಸುರೇಶ್ ಉಪಸ್ಥಿತರಿದ್ದರು. ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ವಾಯುಮಾಲಿನ್ಯ ಮತ್ತು ಪರಿಸರ ಸಂರಕ್ಷಣೆ ಎಂಬ ವಿಷಯದ ಮೇಲೆ ಉಪನ್ಯಾಸ ಕಾರ್ಯಕ್ರಮ ಪ್ರಯುಕ್ತ ಗಿಡ ನೆಡುತ್ತಿರುವುದು. ಚಿತ್ರದಲ್ಲಿ ಕೊಳ್ಳೇಗಾಲ ವಲಯ ಅರಣ್ಯಾಧಿಕಾರಿಗಳಾದ ಶ್ರೀಮತಿ ಮೇಘನ, ಶ್ರೀ ರವಿಕುಮಾರ್ ಆರ್, ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪ, ಶ್ರೀಮತಿ ಮಮತ ಎಸ್, ಐಕ್ಯೂಎಸಿ ಸಂಚಾಲಕರು, ಶ್ರೀ ಪಿ ಸುರೇಶ್, ಮುಖ್ಯಸ್ಥರು, ಪರಿಸರ ಅಧ್ಯಯನ ವಿಭಾಗ, ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರನ್ನು ಕಾಣಬಹುದು.



ಕೊಳ್ಳೇಗಾಲ ವಲಯ ಅರಣ್ಯಾಧಿಕಾರಿಗಳಾದ ಶ್ರೀಮತಿ ಮೇಘನ ರವರು ವಾಯುಮಾಲಿನ್ಯ ಮತ್ತು ಪರಿಸರ ಸಂರಕ್ಷಣೆ ಎಂಬ ವಿಷಯದ ಮೇಲೆ ಉಪನ್ಯಾಸ ನೀಡುತ್ತಿರುವುದು.. ಚಿತ್ರದಲ್ಲಿ ಶ್ರೀ ಸುರೇಶ್ ಪಿ, ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪ, ಶ್ರೀ ರವಿಕುಮಾರ್ ಆರ್, ಮತ್ತು ಶ್ರೀಮತಿ ಮಮತ ಎಸ್, ರವರನ್ನು ಕಾಣಬಹುದು.




ಶ್ರೀ ರವಿಕುಮಾರ್ ಆರ್ ರವರು ವಾಯುಮಾಲಿನ್ಯ ಮತ್ತು ಪರಿಸರ ಸಂರಕ್ಷಣೆ ಎಂಬ ವಿಷಯದ ಮೇಲೆ ಉಪನ್ಯಾಸ ನೀಡುತ್ತಿರುವುದು.. ಚಿತ್ರದಲ್ಲಿ ಶ್ರೀ ಸುರೇಶ್ ಪಿ, ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪ, ಶ್ರೀಮತಿ ಮೇಘನ ಮತ್ತು ಶ್ರೀಮತಿ ಮಮತ ಎಸ್, ರವರನ್ನು ಕಾಣಬಹುದು

